➢ ಮಂಗಳೂರು ವಿದ್ಯುತ್ ಸರಬರಾಜು ಕಂಪನಿ 813 ಹೊಸ ಟಿ.ಸಿ.ಗಳನ್ನು ಖರೀದಿಸಲಾಗಿದೆ.

ಗ್ರಾಮೀಣ ಪ್ರದೇಶಗಳಲ್ಲಿ ವಿಫಲಗೊಂಡ ಪರಿವರ್ತಕಗಳನ್ನು ಶೀಘ್ರವಾಗಿ ಬದಲಾಯಿಸಲು ವಿದ್ಯುತ್ ಸರಬರಾಜು ಕಂಪನಿಗಳು ಕ್ರಮ ಕೈಗೊಳ್ಳುತ್ತಿವೆ.

**847 ಶ್ರೀ ಖಾದರ್ ಯು.ಟಿ. (ಮಂಗಳೂರು)** : ಮಾನ್ಯ ಇಂಧನ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಗ್ರಾಮೀಣ ಪ್ರದೇಶದ ಜನ ಸಾಮಾನ್ಯರಿಗೆ ವಿದ್ಯುತ್ ಸಂಪರ್ಕವನ್ನು ಅಳವಡಿಸಲು ಬೇಕಾದ ವಿದ್ಯುತ್ ಸಾಮಗ್ರಿಗಳ ಸರಬರಾಜಿನಲ್ಲಿ ವಿಳಂಬ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ವಿದ್ಯುತ್ ಸಂಪರ್ಕ ಕಲ್ಪಿಸುವಲ್ಲಿ ಆಗುತ್ತಿರುವ ತೊಂದರೆ ಬಗ್ಗೆ ಸರ್ಕಾರ ಯಾವ ಕ್ರಮಗಳನ್ನು ಕೈಗೊಳ್ಳುವುದು?

**ಶ್ರೀ ಕೆ.ಎಸ್. ಈಶ್ವರಪ್ಪ ( ಇಂಧನ ಸಚಿವರು)** :

ಅ) ಮತ್ತು ಆ)

ಗ್ರಾಮೀಣ ಪ್ರದೇಶದ ಜನ ಸಾಮಾನ್ಯರಿಗೆ ವಿದ್ಯುತ್ ಸಂಪರ್ಕವನ್ನು ಕಲ್ಪಿಸಲು ಬೇಕಾಗಿರುವ ಎಲ್ಲಾ ಸಾಮಗ್ರಿಗಳು ಸಕಾಲದಲ್ಲಿ ಪೂರೈಕೆ ಯಾಗುತ್ತಿದ್ದು, ಅತೀ ಅವಶ್ಯಕ ಸಾಮಗ್ರಿಗಳು ಉಗ್ರಾಣದಲ್ಲಿ ಲಭ್ಯವಿರುತ್ತವೆ. ಬೇಡಿಕೆಗನುಗುಣವಾಗಿ ವಿದ್ಯುತ್ ಸಾಮಗ್ರಿಗಳನ್ನು ಪೂರೈಸಲಾಗುತ್ತಿದ್ದು, ವಿದ್ಯುತ್ ಸಂಪರ್ಕವನ್ನು ಕಲ್ಪಿಸುವಲ್ಲಿ ತೊಂದರೆಯಾಗದಂತೆ ಎಚ್ಚರವಹಿಸಲಾಗುತ್ತಿದೆ.

**720 ಶ್ರೀ ಕುಮಾರಸ್ವಾಮಿ ಕೆ.ಜಿ. (ಶಿವಮೊಗ್ಗ ಗ್ರಾಮಾಂತರ)** : ಮಾನ್ಯ ಇಂಧನ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಶಿವಮೊಗ್ಗ ಜಿಲ್ಲೆ ಮತ್ತು ದಾವಣಗೆರೆ ಜಿಲ್ಲೆಯ ಹೊನ್ನಾಳಿ ತಾಲ್ಲೂಕಿನಲ್ಲಿ ಗಾಳಿಯಂತ್ರಗಳಿಂದ ಉತ್ಪಾದನೆಯಾಗತಕ್ಕ ವಿದ್ಯುತ್ ಪ್ರಮಾಣ ಎಷ್ಟು; (ಘಟಕವಾರು, ಸಂಸ್ಥೆವಾರು ವಿದ್ಯುತ್ ಪ್ರಮಾಣ ವಿವರ ನೀಡುವುದು);